# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 576(754) |
| ಮಾನ್ಯ ಸದಸ್ಯರ ಹೆಸರು | | ಶ್ರೀ ಹೆಚ್.ಎಸ್ ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 18.08.2025 |
| ಪ್ರಶ್ನೆ | | ಉತ್ತರ |
| ಅ) | ಮೈಸೂರು ಜಿಲ್ಲೆಯ ಗಂಗೂಬಾಯಿ ಹಾನಗಲ್ ವಿಶ್ವವಿದ್ಯಾಲಯದ ಸಂಗೀತ ಕಲಾ ಪ್ರದರ್ಶಕಗಳ ವಿಶ್ವವಿದ್ಯಾಲಯಕ್ಕೆ ಮತ್ತು ಕರ್ನಾಟಕದ ಸಾರ್ವಜನಿಕ ವಿಶ್ವವಿದ್ಯಾನಿಲಯಗಳಲ್ಲಿನ ಖಾಯಂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಎಷ್ಟು; ಮತ್ತು ಇಲ್ಲಿ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು: (ವಿವರ ನೀಡುವುದು) | ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯವನ್ನೊಳಗೊಂಡಂತೆ ಕರ್ನಾಟಕ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಖಾಯಂ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಮಾಹಿತಿಯನ್ನು ಅನುಬಂಧ-ರಲ್ಲಿ ಒದಗಿಸಲಾಗಿದೆ.<br><br>ರಾಜ್ಯದಲ್ಲಿರುವ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಹುದ್ದೆಗಳು, ಮೂಲಭೂತ ಸೌಕರ್ಯಗಳ ಕೊರತೆಯಿದ್ದು, ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ದಿನಾಂಕ. 13.02.2025 ಮತ್ತು 09.05.2025ರಂದು ಸಭೆಗಳನ್ನು ನಡೆಸಿದ್ದು, ಇಲ್ಲಿಯವರೆಗೆ ಯಾವುದೇ ಶಿಫಾರಸ್ಸುಗಳನ್ನು ನೀಡಿರುವುದಿಲ್ಲ. ಸದರಿ ಸಮಿತಿಯು ನೀಡುವ ಶಿಫಾರಸ್ಸುಗಳನ್ನು ಸಚಿವ ಸಂಪುಟದ ಮುಂದೆ ಮಂಡಿಸಿ ವಿಶ್ವವಿದ್ಯಾಲಯಗಳು ಶೈಕ್ಷಣಿಕವಾಗಿ ಹಾಗೂ ಆಡಳಿತಾತ್ಮಕವಾಗಿ ಸದೃಢಗೊಳ್ಳಲು ಕ್ರಮವಹಿಸಲಾಗುತ್ತದೆ |
| ಆ) | ವಿಶ್ವವಿದ್ಯಾಲಯವು ಪ್ರಸಿದ್ಧ ಕಲಾವಿದರಿಂದ ವಿಶೇಷ ತರಬೇತಿ ಮತ್ತು ಕಾರ್ಯಾಗಾರಗಳನ್ನು ನಡೆಸುತ್ತದೆಯೇ: ವಿದ್ಯಾರ್ಥಿಗಳಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಅಥವಾ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶಗಳಿವೆಯೇ; | ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಅಧಿನಿಯಮ, 2009ರ ಪ್ರಕರಣ (12)ರನ್ವಯ ವಿಶ್ವವಿದ್ಯಾಲಯವು ಪ್ರಾಚೀನ ಸಂಗೀತ ಮತ್ತು ಪ್ರದರ್ಶಕ ಕಲೆಗಳ ಪರಂಪರೆಗಳಲ್ಲಿ ಇರುವ ಸಂದೇಶವನ್ನು ಕುರಿತು ಜಾಗೃತಿ ಹಾಗೂ ಜ್ಞಾನ ಪ್ರಸಾರವನ್ನು ಉತ್ತೇಜಿಸುವ ದೃಷ್ಟಿಯಿಂದ ಸಂಗೀತ ಕಛೇರಿಗಳು, ಪ್ರದರ್ಶಕ ಕಲೆಗಳ ಕಾರ್ಯಕ್ರಮಗಳು, ವಿಚಾರಗೋಷ್ಠಿಗಳು, ಕಾರ್ಯಗಾರಗಳು, ಸಮ್ಮೇಳನಗಳು ಹಾಗೂ ತರಬೇತಿ ಕಾರ್ಯಕ್ರಮಗಳನ್ನು ನಡೆಸುತ್ತದೆ ಮತ್ತು ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಮತ್ತು ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಲು ಉತ್ತೇಜಿಸಿ ಅವಕಾಶ ಕಲ್ಪಿಸುತ್ತದೆ. |

| | | |
|---|---|---|
| ಇ) | ರಾಜ್ಯದಾದ್ಯಂತ ಸರ್ಕಾರಿ ಕಾಲೇಜುಗಳಲ್ಲಿ ಮೂಲ ಸೌಕರ್ಯವನ್ನು ನವೀಕರಿಸಲು ಸ್ಮಾರ್ಟ್ ತರಗತಿ ಕೊಠಡಿಗಳು, ಡಿಜಿಟಲ್ ಗ್ರಂಥಾಲಯಗಳು ಮತ್ತು ಹೈಸ್ಪೀಡ್ ಇಂಟರ್ನಟ್ ಸಂಪರ್ಕವನ್ನು ಸ್ಥಾಪಿಸಲು ನಿರ್ಧಿಷ್ಟ ಯೋಜನೆಗಳು ಮತ್ತು ಹಣಕಾಸು ಹಂಚಿಕೆಗಳಾವುವು? (ವಿವರ ನೀಡುವುದು) | ರಾಜ್ಯದಾದ್ಯಂತ ಸರ್ಕಾರಿ ಕಾಲೇಜುಗಳಲ್ಲಿ ಮೂಲ ಸೌಕರ್ಯವನ್ನು ನವೀಕರಿಸಲು ಸ್ಮಾರ್ಟ್ ತರಗತಿ ಕೊಠಡಿಗಳು, ಡಿಜಿಟಲ್ ಗ್ರಂಥಾಲಯಗಳು ಮತ್ತು ಹೈಸ್ಪೀಡ್ ಇಂಟರ್ನಟ್ ಸಂಪರ್ಕವನ್ನು ಸ್ಥಾಪಿಸಲು ನಿರ್ಧಿಷ್ಟ ಯೋಜನೆಗಳು ಮತ್ತು ಹಣಕಾಸು ಹಂಚಿಕೆಗಳ ವಿವರ ಈ ಕೆಳಕಂಡಂತಿದೆ; |

| ಯೋಜನೆಗಳು | ಬಿಡುಗಡೆಯಾದ ಮೊತ್ತ | ಷರಾ |
|---|---|---|
| ಸ್ಮಾರ್ಟ್ ತರಗತಿಗಳು: 2500 ಡಿಜಿಟಲ್ ಲರ್ನಿಂಗ್ ಯೋಜನೆ | ರೂ. 27,70,05,545/- | ಸರ್ಕಾರದ ಆದೇಶ ಸಂಖ್ಯೆ: ಇಡಿ 135 ಹೆಚ್‌ಪಿಸಿ 2020, ದಿನಾಂಕ: 23.09.2020ರನ್ವಯ 2020-21ನೇ ಸಾಲಿನಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿ ಬರುವ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, 87 ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು 14 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಡಿಜಿಟಲ್ ಕಲಿಕೆಯನ್ನು ಅನುಷ್ಠಾನಗೊಳಿಸಲು ಅನುಮತಿ ನೀಡಲಾಗಿದೆ. |
| 6500 ಡಿಜಿಟಲ್ ಲರ್ನಿಂಗ್ ಯೋಜನೆ | ರೂ. 90,46,95,507/- | ಸರ್ಕಾರದ ಆದೇಶ ಸಂಖ್ಯೆ: ಇಡಿ 87 ಹೆಚ್‌ಪಿಸಿ 2021, ದಿನಾಂಕ: 01.06.2022ರಲ್ಲಿ 2021-22ನೇ ಸಾಲಿನಲ್ಲಿ ರಾಜ್ಯದ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, 87 ಸರ್ಕಾರಿ ಪಾಲಿಟೆಕ್‌ನಿಕ್‌ಗಳು ಹಾಗೂ 14 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರತಿ ತರಗತಿಗೆ ರೂ. 1.39 ಲಕ್ಷಗಳಂತೆ ಒಟ್ಟು ರೂ. 90,46,95,507/- ಗಳನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ. |

| | | | |
|---|---|---|---|
| | | ಡಿಜಿಟಲ್ ಗ್ರಂಥಾಲಯಗಳು | ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಗ್ರಂಥಾಲಯಗಳನ್ನು ಗಣಕೀಕರಣಗೊಳಿಸಲು National Informatics Centre (NIC) ರವು ಅಭಿವೃದ್ಧಿಪಡಿಸಿರುವ ಇ-ಗ್ರಂಥಾಲಯ (Cloud Version 4.0) ತಂತ್ರಾಂಶಕ್ಕೆ ಚಂದಾದಾರಾಗಿ 196 ಕಾಲೇಜುಗಳ ಗ್ರಂಥಾಲಯಗಳನ್ನು ಸಂಪೂರ್ಣವಾಗಿ ಗಣಕೀಕರಣಗೊಳಿಸಿದ್ದು, ಉಳಿದ ಕಾಲೇಜುಗಳಲ್ಲಿ ಗ್ರಂಥಾಲಯಗಳ ಗಣಕೀಕರಣ ಕಾರ್ಯ ಪ್ರಗತಿಯಲ್ಲಿದೆ. ಇದಕ್ಕೆ ತಗಲುವ ವೆಚ್ಚವನ್ನು ಇಲಾಖೆಯ ಅನುದಾನ ಮತ್ತು ಕಾಲೇಜುಗಳಲ್ಲಿ ಸಂಗ್ರಹವಾಗುವ ವಾಚನಾಲಯ ನಿಧಿಯಿಂದ ಭರಿಸಲಾಗುತ್ತಿದೆ. |
| | | ಹೈಸ್ಪೀಡ್ ಇಂಟರ್ನೆಟ್ ಸಂಪರ್ಕ | ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಕಾಲೇಜುಗಳಿಗೆ ಹೈಸ್ಪೀಡ್ ಇಂಟರ್ನೆಟ್ ಸಂಪರ್ಕವನ್ನು ಸ್ಥಾಪಿಸಲು ನಿರ್ದಿಷ್ಟವಾದ ಯೋಜನೆಯನ್ನು ರೂಪಿಸಿಲ್ಲದಿರುವುದರಿಂದ ಈ ಸಂಬಂಧ ಯಾವುದೇ ಹಣಕಾಸು ಹಂಚಿಕೆಯಾಗಿರುವುದಿಲ್ಲ. |

**ಸಂಖ್ಯೆ**: ಇಡಿ 275 ಯುಎನ್ಇ 2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

# ಅನುಬಂಧ

| ಕ್ರಮ ಸಂ | ವಿಶ್ವವಿದ್ಯಾಲಯದ ಹೆಸರು | ಮಂಜೂರಾದ ಹುದ್ದೆಗಳು | |
|---|---|---|---|
| | | ಬೋಧಕ | ಬೋಧಕೇತರ |
| 01 | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು. | 365 | 1003 |
| 02 | ಮೈಸೂರು ವಿಶ್ವವಿದ್ಯಾಲಯ, ಮೈಸೂರು. | 575 | 560 |
| 03 | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ. | 1821 | - |
| 04 | ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ. | 238 | 590 |
| 05 | ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ. | 206 | 445 |
| 06 | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು. | 273 | 547 |
| 07 | ತುಮಕೂರು ವಿಶ್ವವಿದ್ಯಾಲಯ, ತುಮಕೂರು. | 717 | 214 |
| 08 | ಕನ್ನಡ ವಿಶ್ವವಿದ್ಯಾಲಯ, ಹಂಪಿ. | 51 | 234 |
| 09 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು. | 575 | 299 |
| 10 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ. | 103 | 173 |
| 11 | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ. | 164 | 178 |
| 12 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ. | 139 | 102 |
| 13 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ. | 134 | 287 |
| 14 | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು. | 82 | 51 |
| 15 | ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು. | 15 | 19 |
| 16 | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ. | 21 | 35 |
| 17 | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು. | 161 | 123 |
| 18 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕಾ, ಕೋಲಾರ ಜಿಲ್ಲೆ. | 56 | 92 |
| 19 | ಡಾ.ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ವಿಶ್ವವಿದ್ಯಾಲಯ, ಬೆಂಗಳೂರು. | 17 | 49 |
| 20 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ. | 26 | 219 |
| 21 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು. | 275 | 168 |
| 22 | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು. | 100 | 43 |
| 23 | ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ , ರಾಯಚೂರು | 31 | 256 |
| 24 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ. | 10 | 24 |
| 25 | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ. | 36 | 90 |
| 26 | ಹಾಸನ ವಿಶ್ವವಿದ್ಯಾಲಯ, ಹಾಸನ. | 27 | 245 |
| 27 | ಬೀದರ್ ವಿಶ್ವವಿದ್ಯಾಲಯ, ಬೀದರ್. | 29 | 108 |
| 28 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ. | 24 | 147 |
| 29 | ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ. | 12 | 51 |
| 30 | ಕೊಡಗು ವಿಶ್ವವಿದ್ಯಾಲಯ, ಕೊಡಗು. | 23 | 49 |